OS.340/14

DW-1

ದಿನಾಂಕ:13-10-2022 ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು, ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀಸವಾಲು:- ವಾದಿಪರ ವಕೀಲರಿಂದ.

ಅಸಲು ದಾವಾ ಸಂಖ್ಯೆ105/09 ರಲ್ಲಿ ವಾದಿಯನ್ನು ಪಕ್ಷಗಾರಳನ್ನಾಗಿ ಮಾಡಿರಲಿಲ್ಲ ಎಂದರೆ ಸರಿ. ವಾದಿಯ ಜಿ.ಪಿ.ಎ ಹೋಲ್ಡರ್ ಆದ ಸತೀಶ್ ರವರು ನನ್ನ ಅಕ್ಕನ ಮಗನೆಂದು ನನ್ನ ತಂದೆ ಹೇಳುತ್ತಿದ್ದರು. ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುವ ದಾಖಲೆಗಳ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಿಡಿ.6 ರಿಂದ 8 ರಲ್ಲಿ ನಮೂದಿಸಿರುವ ಜಮೀನುಗಳು ನಮ್ಮ ಕುಟುಂಬಕ್ಕೆ ಸೇರಿದ ಜಮೀನುಗಳಾಗಿವೆ. ಸದರಿ ಜಮೀನುಗಳ ಚಕ್ಕುಬಂದಿ ನನಗೆ ಗೊತ್ತಿಲ್ಲ. ನನಗೆ ಈ ಕೇಸಿನ ಬಗ್ಗೆ ಯಾವುದೇ ಮಾಹಿತಿ ಇಲ್ಲದೇಯಿದ್ದರೂ ಸಹ ಸುಳ್ಳು ದಾಖಲೆಗಳನ್ನು ಮತ್ತು ಸುಳ್ಳು ಪ್ರಮಾಣಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿ. ವಾದಿಗೆ ದಾವಾ ಸ್ವತ್ತುಗಳಲ್ಲಿ ಭಾಗಾಂಶದ ಹಕ್ಕು ಇದೆ ಎಂದರೆ ನನಗೆ ಗೊತ್ತಿಲ್ಲ.

ಮರು ವಿಚಾರಣೆ:- ಇಲ್ಲ.

(ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.